# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪ.ಆರ್/ 174 /2022-23 ದಿನಾಂಕ : 21-12-2022.

ದಿನಾಂಕ 17-12-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಬಿ.ಶಿವರಾಮೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ಪಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಟಿ. ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |
| 10 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |

ದಿನಾಂಕ 17-12-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮು.ತಿ.ನೋ

ಮೊದಲು ರಾಮಯ್ಯಂಗಾರ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಓ.ವಿ.ಜಯಕುಮಾರ್ ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ

1. ಸಜ್ಜನರಾವ್ ವೃತ್ತದ ಬಳಿ ಇರುವ ಐಲ್ಯಾಂಡ್‌ನಲ್ಲಿ ಪರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕದಂತೆ ತಡೆಯುವುದು.
2. ಬೀಡಾಡಿ ಹಸುಗಳ ಹಾವಳಿಯನ್ನು ತಪ್ಪಿಸುವುದು.
3. ಹಸಿಕಸಿ ಮತ್ತು ಒಣಕಸವನ್ನು ವಿಂಗಡಿಸಿ ನೀಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡುವುದು.
4. ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದ ರಸ್ತೆ ಮತ್ತು ಜೈನ್ ಟೆಂಪಲ್ ರಸ್ತೆಗಳಲ್ಲಿ ಹಸುಗಳನ್ನು ಕಟ್ಟುತ್ತಿದ್ದು ಅವುಗಳನ್ನು ತೆರವುಗೊಳಿಸುವುದು.
5. ಬೀಡಾಡಿ ಹಸುಗಳು ಮತ್ತು ಬೀದಿ ನಾಯಿಗಳನ್ನು ಹಿಡಿದುಕೊಂಡು ಹೋಗುವಂತೆ ಪಶುಸಂಗೋಪನಾ ಇಲಾಖೆ ಅಧಿಕಾರಿಗಳು ಕ್ರಮ ವಹಿಸುವುದು.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಸಮಗ್ರವಾಗಿ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರು ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಸಭೆಗೆ ಬಂದಿದ್ದ ಸಾರ್ವಜನಿಕರೊಬ್ಬರು ವಾರ್ಡ್‌ನಲ್ಲಿ ಚರಂಡಿಯ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು ಆದಷ್ಟು ಬೇಗ ಕಾಮಗಾರಿಗಳನ್ನು ಮುಗಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ಕೋರಿದರು. ಮಾನ್ಯ ನೋಡಲ್ ಅಧಿಕಾರಿಗಳು ವಿಷಯ ಪ್ರಸ್ತಾಪಿಸಿ ಶೀಘ್ರವಾಗಿ ಕಾಮಗಾರಿಗಳನ್ನು ಮುಗಿಸುವುದಾಗಿ ತಿಳಿಸಿದರು.

ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ.ವೆಂಕಟೇಶ್ ರವರು ದೂರವಾಣಿ ಮುಖಾಂತರ ಎಂ.ಎಂ.ವಿ.ರಸ್ತೆಯಲ್ಲಿ ಚರಂಡಿ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು ಬೀಗ ಮುಗಿಸಿಕೊಡುವಂತೆ ಕೋರಿದರು. ಈ ವಿಷಯವಾಗಿ ಮಾನ್ಯ ನೋಡಲ್ ಅಧಿಕಾರಿಗಳು ಗುತ್ತಿಗೆದಾರರಿಗೆ ಕಾಮಗಾರಿಯನ್ನು ಬೇಗ ಮುಗಿಸುವಂತೆ ಸೂಚಿಸಬೇಕೆಂದು ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ಸಭೆಯಲ್ಲಿ ಹಾಜರಿದ್ದ ಕೆಲವು ಸಾರ್ವಜನಿಕರು ವಿ.ವಿ.ಪುರಂನ ಕೆಲವು ರಸ್ತೆಗಳಲ್ಲಿ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಕೆಟ್ಟು ಹಾಳಾಗಿರುವುದಾಗಿ ಸಭೆಯ ಗಮನಕ್ಕೆ ತಂದರು. ಮಾನ್ಯ ನೋಡಲ್ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಬೀದಿ ದೀಪಗಳ ನಿರ್ವಹಣೆ ಇಲಾಖೆ ಅಧಿಕಾರಿಗಳನ್ನು ಕೋರುವುದಾಗಿ ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)